**ಕುವೆಂಪು ವಿಶ್ವವಿದ್ಯಾಲಯ**

**ಜ್ಞಾನಸಹ್ಯಾದ್ರಿ, ಶಂಕರಘಟ್ಟ–577451**

**ಸ್ನಾತಕೋತ್ತರ ಇತಿಹಾಸ ಮತ್ತು ಪ್ರಾಕ್ತನಶಾಸ್ತ್ರ ಅಧ್ಯಯನ ವಿಭಾಗ**

**ಸಹಯೋಗ**

**ಮಹಿಳಾ ಅಧ್ಯಯನ ಕೇಂದ್ರ**

---

**ಉದ್ಘಾಟನಾ ಸಮಾರಂಭ "ಪ್ರಾಕ್ತನ ಪ್ರದರ್ಶನ ಶಾಲೆ"**

**ಹಾಗೂ**

**ವಿಶೇಷ ಉಪನ್ಯಾಸ**

**"ಯುವ ಜನತೆಯ ಮೇಲೆ ಸಾಮಾಜಿಕ ಜಾಲತಾಣಗಳ ಪ್ರಭಾವ"**

---

## "ಸಾಮಾಜಿಕ ಜಾಲತಾಣಗಳನ್ನು ಉಪಯೋಗಿಸದಿರುವವರು ಯಾರು? –ಶ್ರೀ ಅಭಿನವ್ ಖರೆ"

**ದಿನಾಂಕ:10–10–2017ರಂದು** ಸ್ನಾತಕೋತ್ತರ ಇತಿಹಾಸ ಮತ್ತು ಪ್ರಾಕ್ತನಶಾಸ್ತ್ರ ಅಧ್ಯಯನ ವಿಭಾಗವು ಮಹಿಳಾ ಅಧ್ಯಯನ ಕೇಂದ್ರದ ಸಹಯೋಗದೊಂದಿಗೆ **"ಪ್ರಾಕ್ತನ ಪ್ರದರ್ಶನ ಶಾಲೆಯ ಉದ್ಘಾಟನೆ"** ಹಾಗೂ **"ಯುವ ಜನತೆಯ ಮೇಲೆ ಸಾಮಾಜಿಕ ಜಾಲತಾಣಗಳ ಪ್ರಭಾವ"**–ಎಂಬ ವಿಷಯದ ಬಗ್ಗೆ ವಿಶೇಷ ಉಪನ್ಯಾಸವನ್ನು ಹಮ್ಮಿಕೊಳ್ಳಲಾಗಿತ್ತು.



**ಶ್ರೀ ಅಭಿನವ್ ಅಶೋಕ್ ಖರೆ, ಐ.ಪಿ.ಎಸ್., ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು, ಶಿವಮೊಗ್ಗ** ಇವರು ವಿಶ್ವವಿದ್ಯಾಲಯದ ಮ್ಯೂಸಿಯಂ ಕಟ್ಟಡದಲ್ಲಿ **ಪ್ರಾಕ್ತನ ಪ್ರದರ್ಶನ ಶಾಲೆಯ ಉದ್ಘಾಟನೆಯನ್ನು** ನೆರವೇರಿಸಿದರು. ಸನ್ಮಾನ್ಯ ಕುಲಪತಿಗಳಾದ ಪ್ರೊ.ಜೋಗನ್ ಶಂಕರ್, ಸನ್ಮಾನ್ಯ ಕುಲಸಚಿವರಾಗಿರುವ ಪ್ರೊ.ಹೆಚ್.ಎಸ್.ಭೋಜ್ಯಾನಾಯ್ಕ್, ಸನ್ಮಾನ್ಯ ಕುಲಸಚಿವರು (ಪರೀಕ್ಷಾಂಗ) ಪ್ರೊ. ರಾಜಾ ನಾಯಕ್, ದೂರ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರಾದ ಪ್ರೊ.ಚಂದ್ರಶೇಖರಪ್ಪ, ಶ್ರೀ ಶೇಜೇಶ್ವರ್ ಆರ್., ಕ್ಯೂರೇಟರ್ ಹಾಗೂ ಸಹಾಯಕ ನಿರ್ದೇಶಕರು, ಶಿವಪ್ಪನಾಯಕ ಅರಮನೆ, ಶಿವಮೊಗ್ಗ, ಇತಿಹಾಸ ಮತ್ತು ಪ್ರಾಕ್ತನಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರಾದ ಪ್ರೊ. ರಾಜಾರಾಮ್ ಹೆಗಡೆ ಹಾಗೂ ಮಹಿಳಾ ಅಧ್ಯಯನ ಕೇಂದ್ರದ ನಿರ್ದೇಶಕರಾದ ಪ್ರೊ. ಸರ್ವಮಂಗಳ ಜಿ., ಇವರು ಉಪಸ್ಥಿತರಿದ್ದರು.

ಉದ್ಘಾಟನಾ ಕಾರ್ಯಕ್ರಮದ ನಂತರ **ಪ್ರೊ.ಎಸ್.ಪಿ.ಹಿರೇಮಠ ಸಭಾಂಗಣದಲ್ಲಿ "ಯುವ ಜನತೆಯ ಮೇಲೆ ಸಾಮಾಜಿಕ ಜಾಲತಾಣಗಳ ಪ್ರಭಾವ"** ವಿಷಯ ಕುರಿತು ಶ್ರೀ **ಅಭಿನವ್ ಅಶೋಕ್ ಖರೆ, ಐ.ಪಿ.ಎಸ್., ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು, ಶಿವಮೊಗ್ಗ** ಇವರು ವಿಶೇಷ ಉಪನ್ಯಾಸದಲ್ಲಿ ಸಾಮಾಜಿಕ ಜಾಲತಾಣಗಳು ಇಂದು ಯುವ





ಜನತೆಯನ್ನು ಹಾದಿ ತಪ್ಪಿಸುವ ನಿಟ್ಟಿನಲ್ಲಿ ತನ್ನ ಕಬಂದ ಬಾಹುಗಳನ್ನು ಚಾಚಿ ಮುನ್ನಡೆದುಕೊಂಡು ಹೋಗುತ್ತಿರುವುದು ವಿಷಾದನೀಯ ಸಂಗತಿ. ವಿದ್ಯಾರ್ಥಿಗಳು ಫೇಸ್‌ಬುಕ್, ಟ್ವೀಟರ್, ವಾಟ್ಸ್‌ಅಪ್ ನಂತಹ ಸಾಮಾಜಿಕ ಜಾಲತಾಣಗಳ ದಾಸ್ಯಕ್ಕೆ ಗುರಿಯಾಗದಂತೆ ಎಚ್ಚರ ವಹಿಸಬೇಕಾಗಿರುವುದು ಇಂದಿನ ತುರ್ತು ಅವಶ್ಯಕತೆ ಇದೆ. ಮಾನಸಿಕ ಹಾಗೂ ಭಾವನಾತ್ಮಕ ದೌರ್ಬಲ್ಯತೆಯನ್ನು ಹೊಂದಿರುವ ವಿದ್ಯಾರ್ಥಿಗಳು ಸಾಮಾಜಿಕ ಜಾಲ ತಾಣಗಳಿಂದ ದೂರ ಉಳಿಯುವುದು ಸೂಕ್ತ ಎಂದು ಕಿವಿಮಾತು ಹೇಳಿದರು ಹಾಗೂ ವಿದ್ಯಾರ್ಥಿಗಳು ಯಾವುದೇ ಸಮಯದಲ್ಲಿ ಇಂತಹ ಸೈಬರ್ ಕ್ರೈಂಗೆ ಸಂಬಂಧಪಟ್ಟಂತಹ ಅನಾಹುತಗಳಿಗೆ ಒಳಗಾದಲ್ಲಿ ತಕ್ಷಣವೇ ಸೈಬರ್ ಪೊಲೀಸ್‌ನ ನೆರವು ಪಡೆಯುವುದು ತುಂಬಾ ಸೂಕ್ತ ಎಂದು ತಿಳಿಸಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ವಿಶ್ವವಿದ್ಯಾಲಯದ ಸನ್ಮಾನ್ಯ ಕುಲಪತಿಗಳಾದ ಪ್ರೊ.ಜೋಗನ್ ಶಂಕರ್‌ರವರು ಶಿವಮೊಗ್ಗದ ಎಸ್.ಪಿ. ಕಛೇರಿಯಿಂದ ವಿಶ್ವವಿದ್ಯಾಲಯದ ಮ್ಯೂಸಿಯಂಗೆ ಪ್ರಾಕ್ತನಾವಶೇಷಗಳನ್ನು ಒದಗಿಸಿದ್ದಕ್ಕೆ ಅಭಿನಂದಿಸಿ ಮಾತನಾಡುತ್ತಾ ಬೇರೆಲ್ಲ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಹೋಲಿಸಿದರೆ ನಮ್ಮ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಸಾಮಾಜಿಕ ಜಾಲ ತಾಣಗಳಿಂದ ದೂರವಿರುವ ಅಂಶ ನಮ್ಮ ಗಮನಕ್ಕೆ ಬಂದಿದ್ದು, ಇದು ತುಂಬಾ ಸಂತೋಷದ ವಿಷಯ ಎಂದರು. ಈ ಸಂದರ್ಭದಲ್ಲಿ ಶ್ರೀ ಅಭಿನವ್ ಅಶೋಕ್ ಖರೆಯವರನ್ನು ಹಾಗೂ ಶ್ರೀ ಶೇಜೇಶ್ವರ್ ಆರ್.ರವರನ್ನು ಸನ್ಮಾನಿಸಲಾಯಿತು.



ವಿಭಾಗದ ಮುಖ್ಯಸ್ಥರಾದ ಪ್ರೊ. ರಾಜಾರಾಮ್ ಹೆಗಡೆಯವರು ಪ್ರಾಸ್ತಾವಿಕ ಮಾತನಾಡಿ ಸರ್ವರನ್ನು ಸ್ವಾಗತಿಸಿ, ಮಹಿಳಾ ಅಧ್ಯಯನ ಕೇಂದ್ರದ ನಿರ್ದೇಶಕರಾದ ಪ್ರೊ. ಸರ್ವಮಂಗಳ ಜಿ. ಸರ್ವರನ್ನು ವಂದಿಸಿದರು. ಕು.ಶೃತಿಯವರು ಕಾರ್ಯಕ್ರಮವನ್ನು ನಿರೂಪಿಸಿದರು.

ಈ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಬೋಧಕ/ ಬೋಧಕೇತರ ಸಿಬ್ಬಂದಿಗಳು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರುಗಳು ಭಾಗವಹಿಸಿದ್ದರು.

**(ಪ್ರೊ.ಸರ್ವಮಂಗಳ ಜಿ)**